# ಕರ್ನಾಟಕ ವಿಧಾನ ಪರಿಷತ್ತು

01. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1155

02. ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು : ಶ್ರೀ ಯು.ಬಿ. ವೆಂಕಟೇಶ್
(ನಾಮನಿರ್ದೇಶನ ಹೊಂದಿದವರು)

03. ಉತ್ತರಿಸುವ ದಿನಾಂಕ : 23/12/2021

04. ಉತ್ತರಿಸುವ ಸಚಿವರು. : ಮಾನ್ಯ ಗೃಹ ಸಚಿವರು.

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯಾದ್ಯಂತ ಮಕ್ಕಳ ಮೇಲೆ ನಡೆದ ಸೈಬರ್ ದೌರ್ಜನ್ಯ ಪ್ರಕರಣಗಳು 2019 ಕ್ಕೆ ಹೋಲಿಸಿದರೆ 2020 ರಲ್ಲಿ ಶೇ.40 ರಷ್ಟು ಹೆಚ್ಚಾಗಿದ್ದು ಈ ಪೈಕಿ ಕರ್ನಾಟಕವು 2ನೇ ಸ್ಥಾನದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:</td><td>ಸರ್ಕಾರದ ಗಮನಕ್ಕೆ ಬಂದಿದೆ.</td></tr>
<tr><td>ಆ</td><td>ಕರ್ನಾಟಕದಲ್ಲಿ ಒಟ್ಟು ದಾಖಲಾಗಿರುವ ಸೈಬರ್ ದೌರ್ಜನ್ಯ ಪ್ರಕರಣಗಳ ಸಂಖ್ಯೆ ಎಷ್ಟು; ಇಂತಹ ಪ್ರಕರಣಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ?</td><td>ರಾಜ್ಯದಲ್ಲಿ ಕಳೆದ 03 ವರ್ಷಗಳಲ್ಲಿ 2019, 2020, 2021 (ನವೆಂಬರ್ ಅಂತ್ಯದವರೆಗೆ ಸೈಬ್ಬರ್ ದೌರ್ಜನ್ಯಕ್ಕೆ ಸಂಬಂಧಿಸಿದಂತೆ ದಾಖಲಾದ ಪ್ರಕರಣಗಳು ಈ ಕೆಳಕಂಡಂತಿದೆ.<br><table><tr><th>ಕ್ರ.ಸಂ</th><th>ವರ್ಷ</th><th>ದಾಖಲಾದ ಪ್ರಕರಣ</th></tr><tr><td>01</td><td>2019</td><td>12043</td></tr><tr><td>02</td><td>2020</td><td>10757</td></tr><tr><td>03</td><td>2021 (ನವೆಂಬರ್-30</td><td>7133</td></tr></table><br>ಸರ್ಕಾರವು ಇಂತಹ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿದ್ದು, ಇಂತಹ ಅಪರಾಧಗಳನ್ನು ತಡೆಗಟ್ಟಲು ಅನೇಕ ಕ್ರಮಗಳನ್ನು ಈ ಕೆಳಕಂಡಂತೆ ಕೈಗೊಳ್ಳಲಾಗಿದೆ.<br>• ಸೈಬರ್ ಅಪರಾಧಗಳನ್ನು ಕಟ್ಟುನಿಟ್ಟಾಗಿ ನಿಯಂತ್ರಿಸಲು ಹಾಗೂ ಇಂತಹ ಪ್ರಕರಣಗಳನ್ನು ತಡೆಗಟ್ಟಲು ರಾಜ್ಯದ ಪ್ರತಿ ಜಿಲ್ಲೆ ಹಾಗೂ ನಗರಗಳಲ್ಲಿ ವಿಶೇಷ ಸೈಬರ್, ನಾರ್ಕೋಟಿಕ್ ಎಕನಾಮಿಕ್ ಪೋಲೀಸ್ ಠಾಣೆಗಳನ್ನು ಸ್ಥಾಪಿಸಲಾಗಿದೆ. ರಾಜ್ಯದಲ್ಲಿ ಒಟ್ಟು 46</td></tr>
</table>

| | | |
|---|---|---|
| | | ಸಿ.ಇ.ಎನ್ ಪೊಲೀಸ್ ಠಾಣೆಗಳು ಹಾಗೂ ಇವುಗಳ ಪೈಕಿ ಬೆಂಗಳೂರು ನಗರದಲ್ಲಿ ಮಾತ್ರ 8 ವಿಶೇಷ ಸಿ.ಇ.ಎನ್ ಪೊಲೀಸ್ ಠಾಣೆಗಳು ಪ್ರತಿ ವಿಭಾಗಕ್ಕೆ ಒಂದರಂತೆ ಕಾರ್ಯ ನಿರ್ವಹಿಸುತ್ತಿದೆ.<br>• ರಾಜ್ಯದ ನಗರ ಮತ್ತು ಮಹಾನಗರಗಳಲ್ಲಿ ಸೈಬರ್ ಮತ್ತು ಆರ್ಥಿಕ ಅಪರಾಧಗಳಲ್ಲಿ ತೊಡಗಿಸಿಕೊಂಡಿರುವವರ ವಿರುದ್ಧ ಐ.ಪಿ.ಸಿ, ಮತ್ತು ಐಟಿ ಕಾಯ್ದೆ ಕೆ.ಪಿ.ಐ.ಡಿ ಕಾಯ್ದೆ, ಎಫ್.ಇ ಕಾಯ್ದೆ ಮತ್ತು Buds-2019 ಕಾಯ್ದೆಯ ವಿವಿಧ ಕಲಂಗಳಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿಕೊಂಡು, ತನಿಖೆಯನ್ನು ನಿಯಮಾನುಸಾರ ಕೈಗೊಂಡು, ಆರೋಪಿತರ ವಿರುದ್ಧ ಘನ ನ್ಯಾಯಾಲಯಗಳಲ್ಲಿ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಲಾಗುತ್ತಿದೆ.<br>• ಸೈಬರ್ ಕ್ರೈಂ ಪ್ರಕರಣಗಳನ್ನು ಪತ್ತೆ ಹಚ್ಚಲು ಬ್ಯಾಂಕಿನಿಂದ ಮಾಹಿತಿಯನ್ನು ಪಡೆಯಲಾಗುತ್ತದೆ.<br>• ಆರೋಪಿಗಳನ್ನು ಪತ್ತೆ ಹಚ್ಚಲು ಅವರ ಮೊಬೈಲ್ ನಂಬರ್‌ಗಳ ಸಿ.ಡಿ.ಆರ್., ಎಸ್.ಡಿ.ಆರ್ ಮತ್ತು ಸಿ.ಎ.ಎಫ್ ಮಾಹಿತಿಗಳನ್ನು ಪಡೆಯಲಾಗುತ್ತದೆ.<br>• ಸೈಬರ್ ಪೊಲೀಸ್ ಠಾಣೆಗಳನ್ನು ಉನ್ನತ ದರ್ಜೆಗೆ ಏರಿಸಿ, ಪೊಲೀಸ್ ಠಾಣೆಯ ಅಧಿಕಾರಿ ಮತ್ತು ಪೊಲೀಸ್ ಸಿಬ್ಬಂದಿಗಳಿಗೆ ಸೈಬರ್ ಅಪರಾಧಗಳನ್ನು ತಡೆಗಟ್ಟುವ ಬಗ್ಗೆ ವಿಶೇಷ ತರಬೇತಿಯನ್ನು (ADVANCE TECHNOLOGY TRAINING ) ನೀಡಲಾಗಿದೆ.<br>• ರಾಜ್ಯದಲ್ಲಿ ಸೈಬರ್ ಕ್ರೈಂ ಅಪರಾಧ ಶೀರ್ಷಿಕೆ ಅಡಿಯಲ್ಲಿ ದಾಖಲಾದ ಪ್ರಕರಣಗಳಲ್ಲಿ ಮುಖ್ಯವಾಗಿ ಹಲವಾರು ಐ.ಪಿ ಗಳನ್ನು (Internet Protocol) ಸೈಬರ್ ಅಪರಾಧಕ್ಕೆ ದುರ್ಬಳಕೆ ಮಾಡುತ್ತಿರುವುದು ಹಾಗೂ ಬೇರೆ ಬೇರೆ ಸ್ಥಳಗಳಿಂದ ಅಕ್ರಮವಾಗಿ ಐ.ಪಿ ಗಳನ್ನು ಬಳಸಿಕೊಂಡು ವಂಚನೆ ಮಾಡುತ್ತಿರುವುದರಿಂದ ಪ್ರಕರಣಗಳ ಪತ್ತೆ/ತನಿಖೆಯನ್ನು ಕೈಗೊಳ್ಳಲಾಗಿರುತ್ತದೆ. |

HD 45PCQ2021

(ಆರಗ ಜ್ಞಾನೇಂದ್ರ)
ಗೃಹ ಸಚಿವರು